ಕ್ರಮ ಸಂಖ್ಯೆ 1062 ದಿ 08/02/18
ಮ.ಮ.ಅ. ಇಲಾಖೆ (ಸ್ತ್ರೀಮರ)

**ಕರ್ನಾಟಕ ಸರ್ಕಾರ**

ಸಂಖ್ಯೆ:ಆರ್‌ಡಿ 54 ಡಿಎಸ್‌ಪಿ 2011

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:20-09-2017.

## ಸುತ್ತೋಲೆ

**ವಿಷಯ:** ಬಾಲ್ಯ ವಿವಾಹ ತಡೆಗಟ್ಟುವಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸುವ ಕುರಿತು.

**ಉಲ್ಲೇಖ:**
1) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 54 ಡಿಎಸ್‌ಪಿ 2011, ದಿನಾಂಕ:18.08.2011
2) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಬ್ಲ್ಯೂಸಿಡಿ 100 ಎಸ್‌ಡಬ್ಲ್ಯೂಡಬ್ಲ್ಯೂ 2006, ದಿನಾಂಕ:07.11.2007.
3) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 54 ಡಿಎಸ್‌ಪಿ 2011, ದಿನಾಂಕ:27.07.2011

*****

ಸರಳ ವಿವಾಹವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸಾಮೂಹಿಕ ವಿವಾಹಗಳನ್ನು ಸಮರ್ಪಕವಾಗಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಆಯೋಜಿಸುವ ಹಾಗೂ ಸಾಮೂಹಿಕ ವಿವಾಹಗಳಲ್ಲಿ ಬಾಲ್ಯ ವಿವಾಹದಂತ ಅನಿಷ್ಟ ಪದ್ಧತಿಗಳನ್ನು ತಡೆಗಟ್ಟುವ ದೃಷ್ಟಿಯಿಂದ, ಸಾಮೂಹಿಕ ವಿವಾಹ ಕಾರ್ಯಕ್ರಮಗಳನ್ನು ಆಯೋಜಿಸುವಾಗ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಉಲ್ಲೇಖ(1)ರ ಸುತ್ತೋಲೆಯಲ್ಲಿ ಹೊರಡಿಸಲಾಗಿರುತ್ತದೆ.

ಉಲ್ಲೇಖ(2)ರ ಅಧಿಸೂಚನೆಯಲ್ಲಿ ಕಂದಾಯ ಇಲಾಖೆಯ ಗ್ರಾಮ ಲೆಕ್ಕಾಧಿಕಾರಿಗಳನ್ನು ಅವರ ಕಾರ್ಯವ್ಯಾಪ್ತಿಗೆ ವಿವಾಹ ನೋಂದಣಿ ಪ್ರಾಧಿಕಾರವೆಂದು ನೇಮಿಸಲಾಗಿದೆ.

ಉಲ್ಲೇಖ(3)ರ ಸುತ್ತೋಲೆಯಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು ಅವರ ಕಾರ್ಯವ್ಯಾಪ್ತಿಯ ಗ್ರಾಮಗಳಲ್ಲಿ/ ವಾರ್ಡ್‌ಗಳಲ್ಲಿ ವಿವಾಹ ಜರುಗಿದ ಸಂದರ್ಭದಲ್ಲಿ ಅಂತಹ ವಿವಾಹಗಳನ್ನು ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು, ವಿವಾಹ ನೋಂದಣಿ ದೃಢೀಕರಣ ಪತ್ರವನ್ನು ನಿಗದಿತ ನಮೂನೆಯಂತೆ ಕಡ್ಡಾಯವಾಗಿ ನೀಡತಕ್ಕದ್ದು. ವಿವಾಹ ನೋಂದಣಿಗಳನ್ನು ಮಾಡಲು ನೋಂದಣಿ ರಿಜಿಸ್ಟ್ರರ್‌ಗಳ ಕಾರ್ಯವ್ಯಾಪ್ತಿಯ ಗ್ರಾಮವಾರು/ವಾರ್ಡ್‌ವಾರು ನಿಗದಿತ ನಮೂನೆಯಂತೆ ನಿರ್ವಹಿಸತಕ್ಕದ್ದು. ದಸ್ತಾವೇಜುಗಳನ್ನು ಪ್ರತಿ ತಿಂಗಳು ಸಂಬಂಧಪಟ್ಟ ರಾಜಸ್ವ ನಿರೀಕ್ಷಕರು ಮತ್ತು ಸಾಮಾಜಿಕ ಭದ್ರತಾ ಶಿರಸ್ತೇದಾರರು ಕಡ್ಡಾಯವಾಗಿ ಪರಿಶೀಲಿಸತಕ್ಕದೆಂದು ಸೂಚಿಸಲಾಗಿರುತ್ತದೆ.

ಸಾಮೂಹಿಕ ವಿವಾಹ ಆಯೋಜಕರು, ಕಲ್ಯಾಣ ಮಂಟಪಗಳ ವ್ಯವಸ್ಥಾಪಕರು, ವಿವಾಹಗಳನ್ನು ಆಯೋಜಿಸುವ ದೇವಸ್ಥಾನಗಳ ಮತ್ತು ಇತರೆ ಧಾರ್ಮಿಕ ಮುಖ್ಯಸ್ಥರು, ವಿವಾಹಗಳನ್ನು ಆಯೋಜಿಸುವ ಸಂದರ್ಭದಲ್ಲಿ ತಹಶೀಲ್ದಾರ್‌ರವರು ಸರ್ಕಾರದ ದಿನಾಂಕ:18.08.2011ರ ಸುತ್ತೋಲೆಯಲ್ಲಿನ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಆಯೋಜಕರ ಗಮನಕ್ಕೆ ತಂದು, ಸದರಿ ಮಾರ್ಗಸೂಚಿಗಳ ಪ್ರಕಾರ ತಪ್ಪದೇ ಕ್ರಮಕೈಗೊಳ್ಳುವಂತೆ ತಿಳಿಸಲು ಎಲ್ಲಾ ತಹಶೀಲ್ದಾರ್‌ರವರಿಗೆ ಸೂಚಿಸಲಾಗಿದೆ.

.....................2

ಗ್ರಾಮ ಲೆಕ್ಕಾಧಿಕಾರಿಗಳು, ಅವರ ಕಾರ್ಯವ್ಯಾಪ್ತಿಯ ವಿವಾಹ ನೋಂದಣಿ ಪ್ರಾಧಿಕಾರವಾಗಿರುವುದರಿಂದ, ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಾವಳಿಗಳು, 2014ರ ನಿಯಮ 4(11)ರ ಅನುಸೂಚಿ(1)ರಲ್ಲಿ ತಿಳಿಸಿರುವಂತೆ ಕ್ರಮವಹಿಸುವುದು. ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ಬಾಲ್ಯ ವಿವಾಹಗಳು ನಡೆದಲ್ಲಿ ಅದಕ್ಕೆ ಸಂಪೂರ್ಣ ಗ್ರಾಮ ಲೆಕ್ಕಾಧಿಕಾರಿಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

(ಕೆ. ಉಮಾಪತಿ)
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿ.ನಿ ಹಾಗೂ ನೋಂ&ಮು)

ಇವರಿಗೆ:-

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ, ಬೆಂಗಳೂರು, ಇವರಿಗೆ - ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಕಂದಾಯ ಭವನ, 5ನೇ ಮಹಡಿ, ಕೆ.ಜಿ ರಸ್ತೆ, ಬೆಂಗಳೂರು ಇಲ್ಲಿಗೆ ಕಳುಹಿಸಬೇಕೆಂದು ಕೋರಿದೆ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಯುಕ್ತರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ. ಕಂದಾಯ ಭವನ, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರು,
5. ಎಲ್ಲಾ ಜಿಲ್ಲಾಧಿಕಾರಿಗಳು,
6. ಎಲ್ಲಾ ಉಪ ವಿಭಾಗಾಧಿಕಾರಿಗಳು/ತಹಸೀಲ್ದಾರರು.
7. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.